ಬೆಂಗಳೂರಿನ ಸಿಲ್ವರ್ ಜ್ಯೂಬಲಿ ಉದ್ಯಾನ ಬಳಿ ನಗರ ಸಾರಿಗೆ ಬಸ್ ನಿಲ್ದಾಣ

926 (931) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರಿನ ಸಿಲ್ವರ್ ಜ್ಯೂಬಲಿ ಉದ್ಯಾನ ಬಳಿ ನಗರ ಸಾರಿಗೆ ಬಸ್ ನಿಲ್ದಾಣವನ್ನು ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೆ;

ಆ) ಹಾಗಿದ್ದಲ್ಲಿ ಇದರಿಂದ ಸ್ಥಳೀಯ ವರ್ತಕರಿಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಶ್ರೀ ಸಿ. ಆರ್. ಸಗೀರ್ ಅಹ್ಮದ್ (ಸಾರಿಗೆ ಸಚಿವರು) :

ಅ) ಸಿಲ್ವರ್ ಜ್ಯೂಬಲಿ ಉದ್ಯಾನ ಬಳಿ ನಗರ ಸಾರಿಗೆ ಬಸ್ ನಿಲ್ದಾಣವನ್ನು ನಿರ್ಮಿಸುವ ಉದ್ದೇಶ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಇರುವುದಿಲ್ಲ. ಆದರೆ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಈ ಪ್ರಸ್ತಾವನೆ ಇರುತ್ತದೆ.

ಆ) ಬಂದಿದೆ. ಆದರೂ ಈ ಬಗ್ಗೆ ಸಂಚಾರಿ ಪೋಲೀಸ್ ಮತ್ತು ತಜ್ಞರು , ಸ್ಥಳೀಯ ವ್ಯಾಪಾರಿಗಳೊಂದಿಗೆ ಸ್ಥಳ ಪರಿಶೀಲನೆ ಮಾಡಿ ದೀರ್ಘವಾಗಿ ಚರ್ಚಿಸಿ ವ್ಯಾಪಾರಿಗಳಿಗೆ ವಾಹನ ನಿಲುಗಡೆಗೆ ಅನುಕೂಲವಾಗುವಂತೆ ಸೂಕ್ತ ಯೋಜನೆಯೊಂದನ್ನು ಪಾಲಿಕೆಯು ರೂಪಿಸುತ್ತಿದೆ.

ರಾಯಚೂರು ಜಿಲ್ಲೆಯಲ್ಲಿ ಆಶ್ರಯ ಮನೆಗಳ ಕಳಪೆ ಕಾಮಗಾರಿ

927 (0932) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯ ಆಶ್ರಯ ಮನೆಗಳನ್ನು ಕರ್ನಾಟಕ ಭೂ ಸೇನಾ ನಿಗಮ ಕಟ್ಟುತ್ತಿದ್ದು, ಆ ಕಾಮಗಾರಿಗಳು ಅತ್ಯಂತ ಕಳಪೆ ಗುಣಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ನಿಗಮದ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗಿದೆಯೇ?

ಶ್ರೀ ಖಮರುಲ್ ಇಸ್ಲಾಂ (ವಸತಿ ಸಚಿವರು) :

ಅ) ಹೌದು

ಆ) ರಾಯಚೂರು ನಗರದ ಚಂದ್ರ ಬಂಡಾ ರಸ್ತೆಯಲ್ಲಿ ಆಶ್ರಯ ಮನೆಗಳನ್ನು ಕರ್ನಾಟಕ ಭೂ ಸೇನಾ ನಿಗಮದವರಿಗೆ ವಹಿಸಿಕೊಡಲಾಗಿದೆ. ಇದರಲ್ಲಿ ಕೆಲವು ಮನೆಗಳು ಜಲಸಂಸ್ಕರಣೆ (ಕ್ಯೂರಿಂಗ್) ಕಡಿಮೆ ಪ್ರಮಾಣದಲ್ಲಿ ಮಾಡಿರುವುದು ಕಂಡು ಬಂದಿತ್ತು. ಅವುಗಳನ್ನು ಉತ್ತಮ ರೀತಿಯಲ್ಲಿ ಪುನಃ ನಿರ್ಮಿಸಲಾಗಿದೆ. ಅಲ್ಲದೇ ಸಂಬಂಧಿಸಿದ ಅಭಿಯಂತರರನ್ನು ವರ್ಗಾವಣೆ ಮಾಡಲಾಗಿದೆ.

ಇದೇ ರೀತಿಯಾಗಿ ಹುಣಸಿಹಾಳಹುಡಾ ಪುನರ್ ವಸತಿ ಗ್ರಾಮದಲ್ಲಿ ಕಪ್ಪು ಮಣ್ಣಿನಲ್ಲಿ 337 ಮನೆಗಳನ್ನು ನಿರ್ಮಿಸುತ್ತಿದ್ದು, ಈ ಪೈಕಿ ಕೇವಲ 5-6 ಮನೆಗಳಲ್ಲಿ ಬಿರುಕು ಬಂದಿರುವುದರಿಂದ, ಜಂಟಿ ನಿರ್ದೇಶಕರು, ಕರ್ನಾಟಕ ಭೂ ಸೇನಾ ನಿಗಮ, ರಾಯಚೂರು ರವರು ಸಂಬಂಧಿಸಿದ ಅಭಿಯಂತರರನ್ನು ಅಮಾನತ್‌ಗೊಳಿಸಿರುತ್ತಾರೆ. ಅಲ್ಲದೇ ಈ ಮನೆಗಳನ್ನು ಕಪ್ಪು ಭೂಮಿಯಲ್ಲಿ ನಿರ್ಮಾಣ ಮಾಡಿರುವುದರಿಂದ ಈ ಕುರಿತು ಹೆಚ್ಚಿನ ತಂತ್ರಜ್ಞಾನದ ಅಭಿಪ್ರಾಯಕ್ಕಾಗಿ ಟಿ.ಆರ್.ಎಫ್ (Tor Steel Research Foundation in India, Bangalore) ರವರನ್ನು ಕೋರಲಾಗಿದೆ.

ಭೂ ಸುಧಾರಣಾ ಕಾಯಿದೆ ತಿದ್ದುಪಡಿ

928(933) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೃಷಿಯೇತರರು ಕೃಷಿ ಭೂಮಿಯನ್ನು ಖರೀದಿಸಲು ಇರುವ ಕಾನೂನಿನ ನಿರ್ಬಂಧ ಗೃಹ ಉದ್ಯಮದ ಪ್ರಗತಿಗೆ ತೊಡಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ, ಕರ್ನಾಟಕ ಭೂ ಸುಧಾರಣಾ; ಕಾಯಿದೆ ತಿದ್ದುಪಡಿ ಮಾಡಲು ಸರ್ಕಾರ ಉದ್ದೇಶಿಸಲಾಗಿದೆಯೇ: ಇದಕ್ಕೆ ಗರಿಷ್ಟ ಕಾಲ ಮಿತಿಯನ್ನು ಏನಾದರೂ ನಿಗದಿಪಡಿಸಿಕೊಂಡಿದೆಯೇ?

ಶ್ರೀ ಹೆಚ್.ಸಿ. ಶ್ರೀ ಕಂಠಯ್ಯ (ಕಂದಾಯ ಸಚಿವರು) :

1) ಇಲ್ಲ.

2) ಉದ್ಭವಿಸುವುದಿಲ್ಲ.

ಬೆಂಗಳೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಯಾತ್ರಿ ನಿವಾಸ್ ವಸತಿ ಗೃಹಗಳು

929 (934) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬೆಂಗಳೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಯಾತ್ರಿ ನಿವಾಸ್ ವಸತಿಗೃಹವನ್ನು ಬಾಡಿಗೆ ನೀಡಲಾಗಿದೆಯೆ;

ಆ) ಯಾರಿಗೆ ಗುತ್ತಿಗೆ ನೀಡಲಾಗಿದೆ;

ಇ) ಗುತ್ತಿಗೆ ಅವಧಿ ಎಷ್ಟು;

ಈ) ನಿಗಧಿತ ಮಾಹೆಯಾನ : ವಾರ್ಷಿಕ ಹಣ ಎಷ್ಟು;

ಉ) ಈ ಒಪ್ಪಂದ ಮಾಡಿಕೊಳ್ಳುವ ಮುನ್ನ ಸಾರ್ವಜನಿಕ ಪ್ರಕಟಣೆ ನೀಡಿ ಅರ್ಜಿ ಆಹ್ವಾನಿಸಿದ್ದೀರಾ?

ಊ) ಭಾಗವಹಿಸಿದವರ ವಿವರ ನೀಡುವುದು.